# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1328
ಮಾನ್ಯ ಸದಸ್ಯರ ಹೆಸರು : ಶ್ರೀ ಎಂ.ನಾಗರಾಜು
ಉತ್ತರಿಸುವ ದಿನಾಂಕ : 22-08-2025
ಉತ್ತರಿಸುವ ಸಚಿವರು : ಮಾನ್ಯ ಸಮಾಜ ಕಲ್ಯಾಣ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಲ್ಲಿ ಎಷ್ಟು ಎಸ್.ಸಿ/ ಎಸ್.ಟಿ ಹಾಸ್ಟೆಲ್‌ಗಳು ಇವೆ; (ಜಿಲ್ಲಾವಾರು ಮಾಹಿತಿ ನೀಡುವುದು) | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ರಾಜ್ಯದಾದ್ಯಂತ 1212 ಸರ್ಕಾರಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು ಮತ್ತು 716 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಸೇರಿ ಒಟ್ಟಾರೆ 1928 ವಿದ್ಯಾರ್ಥಿನಿಲಯಗಳನ್ನು ನಿರ್ವಹಿಸಲಾಗುತ್ತಿದೆ. ಜಿಲ್ಲಾವಾರು ವಿವರವನ್ನು ಅನುಬಂಧ–1 ರಲ್ಲಿ ನೀಡಲಾಗಿದೆ.<br><br>ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವತಿಯಿಂದ 135 ಮೆಟ್ರಿಕ್ ಪೂರ್ವ ಹಾಗೂ 149 ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಸೇರಿ ಒಟ್ಟು 284 ವಿದ್ಯಾರ್ಥಿನಿಲಯಗಳು ಕಾರ್ಯನಿರ್ವಹಿಸುತ್ತಿವೆ. ಜಿಲ್ಲಾವಾರು ವಿವರವನ್ನು ಅನುಬಂಧ–2 ರಲ್ಲಿ ನೀಡಲಾಗಿದೆ. |
| ಆ) | ಈ ಹಾಸ್ಟೆಲ್‌ಗಳಲ್ಲಿ ಮಕ್ಕಳಿಗೆ ಅನುಕೂಲವಾಗುವಂತೆ ಮೂಲಭೂತ ಸೌಕರ್ಯಗಳನ್ನು ನೀಡಲಾಗಿದೆಯೇ; ಇತ್ತೀಚಿನ ದಿನಗಳಲ್ಲಿ ಈ ಹಾಸ್ಟೆಲ್‌ಗಳಲ್ಲಿ ಕನಿಷ್ಠ ಮೂಲಭೂತ ಸೌಕರ್ಯಗಳಿಲ್ಲದೇ ಮಕ್ಕಳು ಪರದಾಡುವಂತಾಗಿದ್ದು, ಸರಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; | ಸಮಾಜ ಕಲ್ಯಾಣ ಇಲಾಖೆಯ ವಿದ್ಯಾರ್ಥಿನಿಲಯಗಳಲ್ಲಿ ದಾಖಲಾಗುವ ವಿದ್ಯಾರ್ಥಿಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸುವ ಸಂಬಂಧ ರಾಜ್ಯವಲಯದಿಂದ ನಿಲಯಗಳಿಗೆ ಅಗತ್ಯವಿರುವ ಸಾಮಗ್ರಿಗಳಾದ ಟೂ ಟಯರ್ ಕಾಟ್, ಸೋಲಾರ್ ವಾಟರ್ ಹೀಟರ್, ಡೈನಿಂಗ್ ಟೇಬಲ್, ಡೀಸೆಲ್ ಜನರೇಟರ್, ಕಾಯರ್ ಮ್ಯಾಟ್ರಸ್ ಮತ್ತು ಪಿಲ್ಲೋ, ಸಿಸಿಟಿವಿ ಕ್ಯಾಮರಾಗಳನ್ನು ಕೆಟಿಪಿಪಿ ನಿಯಮಾವಳಿಗಳನ್ವಯ ಇ-ಟೆಂಡರ್ ಮೂಲಕ ಖರೀದಿಸಿ ಪೂರೈಸಲಾಗುತ್ತಿದೆ.<br><br>ವಿದ್ಯಾರ್ಥಿ ನಿಲಯಗಳಲ್ಲಿ ಅಗತ್ಯವಿರುವ ಇತರೆ ಮೂಲಭೂತ ಸಾಮಗ್ರಿಗಳಾದ ಯುಪಿಎಸ್, ವಾಟರ್ ಪ್ಯೂರಿಫೈರ್, ಲೈಬ್ರರಿ ಬುಕ್ಸ್, ಕ್ರೀಡಾ ಸಾಮಗ್ರಿಗಳು, ಇನ್ಸಿನೇಟರ್, ಬೆಂಕಿ ನಂದಿಸುವ ಉಪಕರಣ, ಪಾತ್ರೆ ಪರಿಕರಗಳು ಹಾಗೂ ಇತರೆ ತುರ್ತು ಸಾಮಗ್ರಿಗಳ ಖರೀದಿಗಾಗಿ ಜಿಲ್ಲಾ ಮಟ್ಟಗಳಲ್ಲಿ ಅನುಷ್ಠಾನಗೊಳಿಸಲು ಅನುದಾನವನ್ನು ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗಿರುತ್ತದೆ.<br><br>2025-26ನೇ ಸಾಲಿಗೆ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಒಟ್ಟು ರೂ.30.00 ಕೋಟಿ ಬಿಡುಗಡೆ ಮಾಡಿ ಆದೇಶಿಸಿದೆ. ಅದರಂತೆ ರಾಜ್ಯವಲಯದಿಂದ ವಿದ್ಯಾರ್ಥಿನಿಲಯಗಳಿಗೆ ಅಗತ್ಯವಿರುವ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಇ-ಟೆಂಡರ್ ಮೂಲಕ ಖರೀದಿಸಲು ಕ್ರಮವಹಿಸಲಾಗುತ್ತಿದೆ. |

ಇ) ರಾಜ್ಯದಲ್ಲಿ ಬೇಡಿಕೆ ಅನುಗುಣವಾಗಿ ಎಸ್.ಸಿ/ ಎಸ್.ಟಿ ಹಾಸ್ಟೆಲ್‌ಗಳು ಇವೆಯೇ; ಇಲ್ಲದಿದ್ದಲ್ಲಿ, ಹೊಸದಾಗಿ ಎಷ್ಟು ಹಾಸ್ಟೆಲ್‌ಗಳನ್ನು ನಿರ್ಮಿಸಲು ಯೋಜಿಸಿದೆ; ಈ ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು; ಇದಕ್ಕೆ ಎಷ್ಟು ಅನುದಾನ ಮೀಸಲಿಡಲಾಗಿದೆ;

ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಒಟ್ಟು 1928 ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಿದ್ಯಾರ್ಥಿ ನಿಲಯಗಳನ್ನು ನಡೆಸಲಾಗುತ್ತಿದ್ದು, ಕಟ್ಟಡಗಳ ವಿವರ ಈ ಕೆಳಕಂಡಂತಿದೆ.

| **ವಿದ್ಯಾರ್ಥಿ ನಿಲಯಗಳ ಸಂಖ್ಯೆ** | **ಸ್ವಂತ ಕಟ್ಟಡ** | **ಬಾಡಿಗೆ/ ಬಾಡಿಗೆ ರಹಿತ** | **ನಿರ್ಮಾಣ ಹಂತ** | **ನಿವೇಶನ ಲಭ್ಯತೆ** | **ನಿವೇಶನ ರಹಿತ** |
|---|---|---|---|---|---|
| 1928 | 1668 | 260 | 194 | 45 | 21 |

ಮೇಲ್ಕಂಡಂತೆ ಬಾಡಿಗೆ/ ಬಾಡಿಗೆ ರಹಿತ ಕಟ್ಟಡಗಳಲ್ಲಿ ನಡೆಸುತ್ತಿರುವ 260 ವಿದ್ಯಾರ್ಥಿ ನಿಲಯಗಳ ಪೈಕಿ 194 ವಿದ್ಯಾರ್ಥಿ ನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ಕಾಮಗಾರಿಗಳು ವಿವಿಧ ಹಂತಗಳಲ್ಲಿ ಪ್ರಗತಿಯಲ್ಲಿರುತ್ತವೆ. 45 ವಿದ್ಯಾರ್ಥಿ ನಿಲಯಗಳಿಗೆ ನಿವೇಶನಗಳು ಲಭ್ಯವಿದ್ದು, ಪ್ರಸಕ್ತ ಸಾಲಿನಲ್ಲಿ ಅನುದಾನದ ಲಭ್ಯತೆಯನ್ನು ಆಧರಿಸಿ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುವುದು. ಬಾಕಿ 21 ವಿದ್ಯಾರ್ಥಿ ನಿಲಯಗಳಿಗೆ ಸೂಕ್ತ ನಿವೇಶನಗಳನ್ನು ಪಡೆಯುವುದು ಬಾಕಿ ಇದ್ದು, ಸೂಕ್ತ ನಿವೇಶನಗಳು ದೊರೆತ ನಂತರ, ಅನುದಾನದ ಲಭ್ಯತೆಯನ್ನು ಆಧರಿಸಿ ಸ್ವಂತ ಕಟ್ಟಡ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುವುದು.

ಮುಂದುವರೆದು, ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳ ಪೈಕಿ ಮಂಜೂರಾತಿ ಸಂಖ್ಯೆಗಿಂತ ದಾಖಲಾತಿ ಸಂಖ್ಯೆ ಹೆಚ್ಚಾಗಿರುವ ವಿದ್ಯಾರ್ಥಿ ನಿಲಯಗಳಲ್ಲಿ ಹೆಚ್ಚುವರಿ ವಾಸದ ಕೊಠಡಿ/ ಶೌಚಾಲಯ/ ಸ್ನಾನಗೃಹಗಳ ನಿರ್ಮಾಣ ಸಂಬಂಧವಾಗಿ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಮೂಲಕ ಸೂಕ್ತ ಪ್ರಸ್ತಾವನೆಗಳನ್ನು ಪಡೆದು, ಅನುದಾನ ಲಭ್ಯತೆಗೆ ಅನುಗುಣವಾಗಿ ಹೆಚ್ಚುವರಿ ವಾಸದ ಕೊಠಡಿ/ ಶೌಚಾಲಯ/ ಸ್ನಾನಗೃಹಗಳ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳಲು ಕ್ರಮವಹಿಸಲಾಗುತ್ತಿದೆ.

ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಿರ್ವಹಿಸಲಾಗುತ್ತಿರುವ ಎಲ್ಲಾ ವಿದ್ಯಾರ್ಥಿನಿಲಯಗಳಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಸರ್ಕಾರದ ಸುತ್ತೋಲೆ ಸಂಖ್ಯೆ:ಸಕಇ 87 ಸಮನ್ವಯ 2013, ದಿ:20-07-2013 ರನ್ವಯ ಇಲಾಖೆಯ ವಿದ್ಯಾರ್ಥಿನಿಲಯಗಳಿಗೆ ಪ್ರವೇಶ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಪ.ಜಾತಿ/ಪ.ವರ್ಗದ ವಿದ್ಯಾರ್ಥಿಗಳಿಗೆ ನಿಲಯದಲ್ಲಿ ಪ್ರವೇಶ ಕಲ್ಪಿಸಲಾಗುತ್ತಿದೆ. ಪ್ರಸ್ತುತ ವಿದ್ಯಾರ್ಥಿನಿಲಯಗಳ ಕಟ್ಟಡದ ಸಾಮರ್ಥ್ಯಾನುಸಾರ (Permissible Strength) ಪ್ರವೇಶಾವಕಾಶ ಕಲ್ಪಿಸಲು ಅವಕಾಶ ಕಲ್ಪಿಸಲಾಗಿರುತ್ತದೆ.

---3

| | | |
|---|---|---|
| ಈ) | ಇಲಾಖೆ ವ್ಯಾಪ್ತಿಗೊಳಪಡುವ ಎಷ್ಟು ಹಾಸ್ಟೆಲ್‌ಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ ಮತ್ತು ಎಷ್ಟು ಹಾಸ್ಟೆಲ್‌ಗಳು ಸ್ವಂತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ? (ಮಾಹಿತಿ ನೀಡುವುದು) | ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ನಡೆಸುತ್ತಿರುವ ಒಟ್ಟು 1928 ಡಾ.ಬಿ.ಆರ್.ಅಂಬೇಡ್ಕರ್ ಸರ್ಕಾರಿ ವಿದ್ಯಾರ್ಥಿ ನಿಲಯಗಳ ಪೈಕಿ 1668 ವಿದ್ಯಾರ್ಥಿ ನಿಲಯಗಳು ಸ್ವಂತ ಕಟ್ಟಡಗಳಲ್ಲಿ ಮತ್ತು 260 ವಿದ್ಯಾರ್ಥಿ ನಿಲಯಗಳು ಬಾಡಿಗೆ/ ಬಾಡಿಗೆ ರಹಿತ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ. |

**ಸಕಇ 718 ಪಕವಿ 2025**

**(ಡಾ: ಹೆಚ್.ಸಿ.ಮಹದೇವಪ್ಪ)**
**ಸಮಾಜ ಕಲ್ಯಾಣ ಸಚಿವರು**

| ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ.ಎಂ.ನಾಗರಾಜು (ವಿಧಾನಸಭೆಯಿಂದ ಚುನಾಯಿತರಾದವರು) ರವರ ಚುಕ್ಕೆಗುರುತಿಲ್ಲದ ಪ್ರಶ್ನೆ 1328ಕ್ಕೆ ಅನುಬಂಧ - 1 | | |
|---|---|---|
| ಕ್ರ.ಸಂ | ಜಿಲ್ಲೆಯ ಹೆಸರು | ವಿದ್ಯಾರ್ಥಿ ನಿಲಯಗಳ ಸಂಖ್ಯೆ |
| 1 | ಬಾಗಲಕೋಟೆ | 69 |
| 2 | ಬಳ್ಳಾರಿ | 40 |
| 3 | ಬೆಳಗಾವಿ | 97 |
| 4 | ಬೆಂಗಳೂರು ಗ್ರಾಮಾಂತರ | 33 |
| 5 | ಬೆಂಗಳೂರು ನಗರ | 60 |
| 6 | ಬೀದರ್ | 61 |
| 7 | ಚಾಮರಾಜನಗರ | 56 |
| 8 | ಚಿಕ್ಕಬಳ್ಳಾಪುರ | 72 |
| 9 | ಚಿಕ್ಕಮಗಳೂರು | 59 |
| 10 | ಚಿತ್ರದುರ್ಗ | 93 |
| 11 | ದಕ್ಷಿಣ ಕನ್ನಡ | 30 |
| 12 | ದಾವಣಗೆರೆ | 68 |
| 13 | ಧಾರವಾಡ | 35 |
| 14 | ಗದಗ | 43 |
| 15 | ಹಾಸನ | 93 |
| 16 | ಹಾವೇರಿ | 60 |
| 17 | ಕಲಬುರಗಿ | 109 |
| 18 | ಕೊಡಗು | 21 |
| 19 | ಕೋಲಾರ | 69 |
| 20 | ಕೊಪ್ಪಳ | 51 |
| 21 | ಮಂಡ್ಯ | 68 |
| 22 | ಮೈಸೂರು | 83 |
| 23 | ರಾಯಚೂರು | 77 |
| 24 | ರಾಮನಗರ | 50 |
| 25 | ಶಿವಮೊಗ್ಗ | 79 |
| 26 | ತುಮಕೂರು | 102 |
| 27 | ಉಡುಪಿ | 23 |
| 28 | ಉತ್ತರ ಕನ್ನಡ | 33 |
| 29 | ವಿಜಯನಗರ | 63 |
| 30 | ವಿಜಯಪುರ | 78 |
| 31 | ಯಾದಗಿರಿ | 53 |
| | ಒಟ್ಟು : | 1928 |

## ಅನುಬಂಧ - ೨

### ಪರಿಶಿಷ್ಟ ವರ್ಗದ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಜಿಲ್ಲಾವಾರು ವಿವರ

| ಕ್ರ.ಸಂ | ಜಿಲ್ಲೆ | ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳ ಸಂಖ್ಯೆ | ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳ ಸಂಖ್ಯೆ | ಒಟ್ಟು |
|---|---|---|---|---|
| 1 | ಬೆಂಗಳೂರು (ನ) | 0 | 7 | 7 |
| 2 | ಬೆಂಗಳೂರು (ಗ್ರಾ) | 1 | 1 | 2 |
| 3 | ರಾಮನಗರ | 3 | 2 | 5 |
| 4 | ಕೋಲಾರ | 5 | 2 | 7 |
| 5 | ಚಿಕ್ಕಬಳ್ಳಾಪುರ | 1 | 8 | 9 |
| 6 | ತುಮಕೂರು | 5 | 8 | 13 |
| 7 | ಚಿತ್ರದುರ್ಗ | 7 | 9 | 16 |
| 8 | ದಾವಣಗೆರೆ | 6 | 6 | 12 |
| 9 | ಶಿವಮೊಗ್ಗ | 2 | 1 | 3 |
| 10 | ಮೈಸೂರು | 12 | 5 | 17 |
| 11 | ಚಾಮರಾಜನಗರ | 6 | 4 | 10 |
| 12 | ಕೊಡಗು | 9 | 2 | 11 |
| 13 | ದಕ್ಷಿಣ ಕನ್ನಡ | 9 | 5 | 14 |
| 14 | ಉಡುಪಿ | 3 | 5 | 8 |
| 15 | ಚಿಕ್ಕಮಗಳೂರು | 7 | 4 | 11 |
| 16 | ಹಾಸನ | 2 | 3 | 5 |
| 17 | ಮಂಡ್ಯ | 1 | 2 | 3 |
| 18 | ಬೆಳಗಾವಿ | 8 | 6 | 14 |
| 19 | ವಿಜಯಪುರ | 1 | 1 | 2 |
| 20 | ಉತ್ತರ ಕನ್ನಡ | 1 | 3 | 4 |
| 21 | ಬಾಗಲಕೋಟೆ | 1 | 3 | 4 |
| 22 | ಧಾರವಾಡ | 0 | 3 | 3 |
| 23 | ಗದಗ | 2 | 3 | 5 |
| 24 | ಹಾವೇರಿ | 4 | 5 | 9 |
| 25 | ಕಲಬುರಗಿ | 3 | 2 | 5 |
| 26 | ಯಾದಗಿರಿ | 3 | 3 | 6 |
| 27 | ಬಳ್ಳಾರಿ | 4 | 11 | 15 |
| 28 | ವಿಜಯನಗರ | 8 | 10 | 18 |
| 29 | ಬೀದರ್ | 4 | 6 | 10 |
| 30 | ರಾಯಚೂರು | 10 | 12 | 22 |
| 31 | ಕೊಪ್ಪಳ | 7 | 7 | 14 |
| ಒಟ್ಟು | | **135** | **149** | **284** |

ನಿರ್ದೇಶಕರು
ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.